ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ :   25-03-2021   ಪ್ರಶ್ನೆ ಸಂಖ್ಯೆ :   291 (2149)

ಸದಸ್ಯರ ಹೆಸರು ಮತ್ತು ಕ್ಷೇತ್ರ :   ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ :   25-03-2021

ಉತ್ತರಿಸುವ ಸಚಿವರು :   ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ವಿಷಯ :   ನಿರ್ಭಯಾ ನಿಧಿಯ ಕುರಿತು

(ಅ) ಕಳೆದ 5 ವರ್ಷಗಳಲ್ಲಿ ಬೆಂಗಳೂರು ನಗರದಲ್ಲಿ ಪೊಲೀಸ್ ಇಲಾಖೆಯು ನಿರ್ಭಯಾ ನಿಧಿಯನ್ನು ಯಾವ ಯಾವ ವಿಷಯಗಳಿಗೆ ವೆಚ್ಚ ಮಾಡಿದೆ; (ವಿಭಾಗವಾರು ಮಾಹಿತಿ ನೀಡುವುದು)

(ಆ) ಹೆಚ್ಚುವರಿ ಪೋಲಿಸ್ ಆಯುಕ್ತರು ನಿರ್ಭಯಾ ನಿಧಿಯ ವೆಚ್ಚದಲ್ಲಿ ಭ್ರಷ್ಟಾಚಾರ ಎಸಗಿರುವ ಬಗ್ಗೆ ಸರ್ಕಾರದ ಗೃಹ ಇಲಾಖೆಯ ಕಾರ್ಯದರ್ಶಿಗಳು ಹೇಳಿಕೆ ನೀಡಿರುವ ಕುರಿತು ಪತ್ರಿಕೆಗಳಲ್ಲಿ ವರದಿಯಾಗಿದ್ದು ಈ ಕುರಿತು ಸರ್ಕಾರದ ನಿಲುವೇನು;

(ಇ) ನಿರ್ಭಯಾ ನಿಧಿಯ ವೆಚ್ಚದಲ್ಲಿ ಭ್ರಷ್ಟಾಚಾರವಾಗಿದೆಯೇ; ಇಲ್ಲವಾದಲ್ಲಿ, ಸರ್ಕಾರದ ಕಾರ್ಯದರ್ಶಿಗಳು ರಾಜ್ಯದ ಜನತೆಗೆ ತಪ್ಪು ಮಾಹಿತಿ ನೀಡುತ್ತಿದ್ದಾರೆಯೇ; ಈ ಕುರಿತು ಸರ್ಕಾರದ ನಿಲುವೇನು;

(ಈ) ಭ್ರಷ್ಟಾಚಾರವೆಸಗಿದ ಆರೋಪ ಹೊತ್ತಿರುವ ಅಧಿಕಾರಿಯ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?